ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

कर्नाटक-संस्कृत-विश्वविद्यालयः
श्री चामराजेन्द्र संस्कृत महाविद्यालयस्य परिसरः
पम्पमहाकविमार्गः, चामराजपेटे, बेङ्गलूरु – ५६००१८.

**ದಿನಾಂಕ: 04.12.2024ರಂದು Online ಮೂಲಕ ನಡೆದ ಪ್ರಶಾಸನ ಸಮಿತಿಯ ಸಭೆಯ ನಡಾವಳಿ**

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಶಾಸನ ಸಮಿತಿಯ ಸಭೆಯನ್ನು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: **04-12-2024** ಬುಧವಾರ ಬೆಳಿಗ್ಗೆ 11.30 ಗಂಟೆಗೆ **Online** ಮೂಲಕ ಕರೆಯಲಾಗಿತ್ತು.

**ಆನ್ಲೈನ್ ಸಭೆಗೆ ಹಾಜರಾದವರು:**

1. ಡಾ. ಅಹಲ್ಯಾ ಎಸ್., ಕುಲಪತಿಗಳು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ – ಅಧ್ಯಕ್ಷರು
2. ಪ್ರೊ. ರಜನೀಶ ಕುಮಾರ ಮಿಶ್ರ, ಸಂಸ್ಕೃತ ಮತ್ತು ಇಂಡಿಕ್ ಅಧ್ಯಯನ ವಿಭಾಗ, ಜವಾಹರಲಾಲ ನೆಹರು ವಿಶ್ವವಿದ್ಯಾಲಯ, ನವದೆಹಲಿ – 110067 – ಸದಸ್ಯರು
3. ಡಾ. ಆರ್. ಶ್ರೀಧರ ಶಾಸ್ತ್ರಿ ಸೂರಿ, ಪ್ರಾಧ್ಯಾಪಕರು(ನಿ), ಶ್ರೀ ಸಿದ್ಧಲಿಂಗೇಶ್ವರ ಸಂಸ್ಕೃತ ಕಾಲೇಜು, ಶ್ರೀ ಸಿದ್ಧಗಂಗಾ ಮಠ, ತುಮಕೂರು – ಸದಸ್ಯರು
4. ಡಾ. ಬಂಗಾರಮ್ಮ, ಕೆ. ನಂ–126, ಶಾಂತಿನಗರ, ನಾಗರತ್ನಮ್ಮ ಬಡಾವಣೆ, ಶಿವಮೊಗ್ಗ. 577201. – ಸದಸ್ಯರು
5. ಡಾ. ಶಿವಲಿಂಗಯ್ಯ, 'Shrungara' No. 9– 75/3(20) Kankandy,'B' BAJAL Post, Mangalore 575007 – ಸದಸ್ಯರು
6. ಶ್ರೀ ಬಸಪ್ಪ ಡೊಂಕಬಳ್ಳಿ, #302/302 ಶ್ರೀನಿಧಿ ನಿಲಯ, ಬೈರಪ್ಪ ಬಿಲ್ಡಿಂಗ್, 4ನೇ ಅಡ್ಡರಸ್ತೆ, ರಾಮಮಂದಿರ ರಸ್ತೆ, ಕೊಡಿಗೆಹಳ್ಳಿ, ಬೆಂಗಳೂರು– 560092 – ಸದಸ್ಯರು
7. ಶ್ರೀ ಹನುಮಂತನಾಥ ಸ್ವಾಮೀಜಿ, ಪೀಠಾಧ್ಯಕ್ಷರು, ಕುಂಚಿಟಿಗರ ಮಹಾ ಸಂಸ್ಥಾನ ಮಠ (ರಿ.), ನರಸಿಂಹಗಿರಿ ಕ್ಷೇತ್ರ, ಕೊರಟಗೆರೆ, ತುಮಕೂರು – 572129 – ಸದಸ್ಯರು
8. ಶ್ರೀ ನಾರಾಯಣ ಯಾಜಿ ಬಿನ್ ರಾಮ ಯಾಜಿ, ಕೆ.ಹೆಚ್.ಬಿ ಕಾಲೋನಿ, ಪ್ರಭಾತ ನಗರ, ಹೊನ್ನಾವರ, ಉತ್ತರ ಕನ್ನಡ–581334 – ಸದಸ್ಯರು
9. ಶ್ರೀ ವಿಶ್ವನಾಥ ಪಿ. ಹಿರೇಮಠ, ಕುಲಸಚಿವರು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ. – ಸದಸ್ಯ ಕಾರ್ಯದರ್ಶಿಗಳು

**ಆನ್ಲೈನ್ ಸಭೆಗೆ ಗೈರು ಹಾಜರಾದವರು:**

1. ಅಪರ ಮುಖ್ಯ ಕಾರ್ಯದರ್ಶಿಗಳು, ಹಣಕಾಸು ಇಲಾಖೆ. – ಸದಸ್ಯರು
2. ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ – ಸದಸ್ಯರು
3. ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ(ಮುಜರಾಯಿ) – ಸದಸ್ಯರು
4. ಆಯುಕ್ತರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ – ಸದಸ್ಯರು
5. **ಶ್ರೀ ಪ್ರದೀಪ್ ಈಶ್ವರ್**, ಮಾನ್ಯ ವಿಧಾನಸಭಾ ಸದಸ್ಯರು, ಚಿಕ್ಕಬಳ್ಳಾಪುರ ವಿಧಾನ ಸಭಾ ಕ್ಷೇತ್ರ, ನಂ–516, ಪೆರೇಸಂದ್ರ ಗ್ರಾಮ, ಚಿಕ್ಕಬಳ್ಳಾಪುರ ತಾಲ್ಲೂಕು, ಚಿಕ್ಕಬಳ್ಳಾಪುರ– 562104. – ಸದಸ್ಯರು
6. ಶ್ರೀಮತಿ ಸಮತಾ ಹೊಸಪೇಟೆ, "ಬಾಲಾಜಿ", ಕುವೆಂಪು ನಗರ ಬಸ್ ನಿಲ್ದಾಣದ ಎದುರುಗಡೆ, ಹನುಮಾನ್ ನಗರ, ಬೆಳಗಾವಿ – 19 – ಸದಸ್ಯರು

162

7. ಡಾ. ಮುನೀರ್ ಅಹಮ್ಮದ್ ನಂ-403, 38ಎ ಕ್ರಾಸ್, 26ನೇ ಮೇನ್, 9ನೇ ಬ್ಲಾಕ್, ಜಯನಗರ, ಬೆಂಗಳೂರು- 560041 - ಸದಸ್ಯರು

ಸಭೆಯ ಆರಂಭದಲ್ಲಿ ಕುಲಸಚಿವರು ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನೂ ಸ್ವಾಗತಿಸಿದರು. ನಂತರ ಕಾರ್ಯಸೂಚಿಯಂತೆ ವಿಷಯವಾರು ಚರ್ಚಿಸಿ ನಿರ್ಣಯ ಕೈಗೊಳ್ಳಲಾಯಿತು.

| ವಿ.ಸಂ | ವಿಷಯ ಮತ್ತು ಟಿಪ್ಪಣಿ |
|---|---|
| 01. | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು ಅಡಿಯಲ್ಲಿ "Karnataka Samskrit University Bh. Mahaveer and Bh. Buddha Centre for Prakrut and Pali Language" ಅಧ್ಯಯನ ಕೇಂದ್ರ ಪ್ರಾರಂಭಿಸಲು ಪ್ರಶಾಸನ ಸಮಿತಿಯ ಒಪ್ಪಿಗೆಗಾಗಿ ಮಂಡಿಸಿದೆ. |
| ಟಿಪ್ಪಣಿ | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಚಾಮರಾಜ ಪೇಟೆ, ಬೆಂಗಳೂರು ಇದರ ಅಡಿಯಲ್ಲಿ ಪಾಲಿ ಮತ್ತು ಪ್ರಾಕೃತ ಭಾಷೆಗಳಿಗೆ ಮೀಸಲಾದ "Karnataka Samskrit University Bh. Mahaveer and Bh. Buddha Centre for Prakrut and Pali Language" ಕೇಂದ್ರವನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಸ್ಥಾಪಿಸಲು ಹಾಗೂ ಪ್ರಸ್ತಾವಿತ ಅಧ್ಯಯನ ಕೇಂದ್ರವು ಪ್ರಾಕೃತ ಮತ್ತು ಪಾಲಿ ಭಾಷೆಗಳಲ್ಲಿ ಶೈಕ್ಷಣಿಕ ಸಂಶೋಧನೆಯನ್ನು ಉತ್ತೇಜಿಸುವುದು ಮತ್ತು ಈ ಭಾಷೆಗಳನ್ನು ಭಾರತೀಯ ಜ್ಞಾನ ವ್ಯವಸ್ಥೆಗಳ (Indian Knowledge Systems) ಚೌಕಟ್ಟಿನಲ್ಲಿ ಸಂಯೋಜಿಸುವುದು, ವಿವಿಧ ಪಾಂಡಿತ್ಯಪೂರ್ಣ ಚಟುವಟಿಕೆಗಳನ್ನು ಕೈಗೊಳ್ಳಲು, ಪ್ರಾಚೀನ ಸಾಹಿತ್ಯ ಗ್ರಂಥಗಳು, ಹಸ್ತಪತಿಗಳ ಸಂರಕ್ಷಣೆ, ಪ್ರಾಚೀನ ಪ್ರಾಕೃತ ಹಸ್ತಪ್ರತಿಗಳ ಡಿಜಿಟಲೀಕರಣ, ಅನುವಾದ, ಪತ್ರಿಗಳ ಪ್ರಕಟಣೆ, ಪ್ರಾಕೃತ/ಜೈನ್ ಪಾಲಿ/ ಬೌದ್ಧ ವಿವಿಧ ಮಧ್ಯಸ್ಥಗಾರರ ಸಂವೇದನೆ, ಸಾಂಪ್ರದಾಯಿಕ ಕಲೆಗಳು, ಆಚರಣೆಗಳು ಮತ್ತು ಹಬ್ಬಗಳನ್ನು ರಕ್ಷಿಸುವುದು, ಪ್ರಾಕೃತದ ಸಂಕ್ಷಿಪ್ತ ನಿಘಂಟನ್ನು ಕನ್ನಡದಲ್ಲಿ ಸಂಕ್ಷಿಪ್ತವಾಗಿ ಪ್ರಕಟಿಸುವುದು, ಶಾಸ್ತ್ರೀಯ ಸಾಹಿತ್ಯ, ಇತಿಹಾಸ ಮತ್ತು ತತ್ತ್ವಶಾಸ್ತ್ರದಲ್ಲಿ ಪರಿಣತಿಯನ್ನು ಬೆಳೆಸಲು ವಿನ್ಯಾಸಗೊಳಿಸಲಾದ ಪಾಲಿ ಮತ್ತು ಪ್ರಾಕೃತ ಭಾಷೆಗಳಲ್ಲಿ ಅಲ್ಪಾವಧಿಯ ಕೋರ್ಸ್‌ಗಳು, 'ಪ್ರಮಾಣಪತ್ರಗಳು, ಡಿಪ್ಲೊಮಾಗಳು ಮತ್ತು ಸುಧಾರಿತ ಡಿಪ್ಲೊಮಾಗಳನ್ನು ಒಳಗೊಂಡಿರುವ ರಚನಾತ್ಮಕ ಪಠ್ಯಕ್ರಮವನ್ನು ಈ ಅಧ್ಯಯನ ಕೇಂದ್ರದಿಂದ ನೀಡಲು ಉದ್ದೇಶಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ:MWD-MDS/711/2024, ಬೆಂಗಳೂರು, ದಿನಾಂಕ:22.11.2024ರಂದು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು- ಅಡಿಯಲ್ಲಿ "Karnataka Samskrit University Bh. Mahaveer and Bh, Buddha Centre for Prakrut and Pali Language" ಅಧ್ಯಯನ ಕೇಂದ್ರವನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಪ್ರಾರಂಭಿಸಲು ಮತ್ತು ಈ ಕಾರ್ಯಕ್ರಮಕ್ಕಾಗಿ ತಗಲುವ ವೆಚ್ಚವನ್ನು ಪ್ರಸಕ್ತ ಸಾಲಿನ ಆಯವ್ಯಯದ ಜೈನ್, ಬೌದ್ಧ ಮತ್ತು ಸಿಖ್ ಸಮುದಾಯಗಳ ಅಭಿವೃದ್ಧಿ ಯೋಜನೆಯ ಲೆಕ್ಕಶೀರ್ಷಿಕೆಯಡಿ ಒದಗಿಸಿರುವ ಅನುದಾನದಲ್ಲಿ ಈ ಕೆಳಕಂಡಂತೆ 03 ವರ್ಷಗಳಿಗೆ ಅನುದಾನ ಮಂಜೂರು ಮಾಡಿ, ಬಿಡುಗಡೆ ಮಾಡಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ. |

| 2024–25ನೇ ಸಾಲಿಗೆ (ರೂ,ಗಳಲ್ಲಿ) | 2025–26ನೇ ಸಾಲಿಗೆ (ರೂ,ಗಳಲ್ಲಿ) | 2026–27ನೇ ಸಾಲಿಗೆ (ರೂ,ಗಳಲ್ಲಿ) | ಮಂಜೂರು ಮಾಡಿರುವ ಒಟ್ಟು ಅನುದಾನ (ರೂ,ಗಳಲ್ಲಿ) |
|---|---|---|---|
| 23,50,000/- | 30,30,000/- | 30,30,000/- | 84,10,000/- |

ಈ ಯೋಜನೆಗೆ ಪ್ರಶಾಸನ ಸಮಿತಿಯ ಅನುಮೋದನೆ ಕೋರಿದೆ.

| | |
|---|---|
| ನಿರ್ಣಯ | ಸರ್ಕಾರದ ಆದೇಶಕ್ಕನುಗುಣವಾಗಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ "Karnataka Samskrit University Bhagawan. Mahaveer and Bhagawan. Buddha Centre for Prakrut and Pali Language" ಅಧ್ಯಯನ ಕೇಂದ್ರ ಪ್ರಾರಂಭಿಸಲು ಪ್ರಶಾಸನ ಸಮಿತಿಯು ತಮ್ಮ ಸಹಮತಿ ನೀಡಿರುತ್ತದೆ. ಮುಂದುವರೆದು, ಪ್ರಾಕೃತ ಹಾಗೂ ಪಾಲಿ ಅಧ್ಯಯನ ಕೇಂದ್ರಗಳಿಗೆ ಸಂಬಂಧಿಸಿದಂತೆ ನಿರ್ದೇಶಕರಿಗೆ ನಿಗದಿಪಡಿಸಿರುವ ಮಾಹೆಯಾನ ರೂ 60,000/-(ಅರವತ್ತು ಸಾವಿರ ರೂಗಳ ಮಾತ್ರ)ಗಳ ಗೌರವ ಧನದ ಪೈಕಿ, ಪ್ರಾಕೃತ ಅಧ್ಯಯನ ಕೇಂದ್ರಕ್ಕೆ ಡಾ. ರಾಮಚಂದ್ರ ಭಟ್ ಕೋಟೆಮನೆ ವಿಶ್ರಾಂತ ಕುಲಪತಿಗಳು, ಸ್ವಾಮಿ ವಿವೇಕಾನಂದ ಯೋಗ ಅನುಸಂಧಾನ ಸಂಸ್ಥಾನ ಜಿಗಣಿ ಹಾಗೂ ನಿರ್ದೇಶಕರು, ವೇದ ವಿಜ್ಞಾನ ಗುರುಕುಲ, ಚನ್ನೇನಹಳ್ಳಿ- ಇವರನ್ನು ನಿರ್ದೇಶಕರನ್ನಾಗಿ ನೇಮಿಸಿ ಮಾಹೆಯಾನ ರೂ 30,000/-ಗಳ ಗೌರವ ಧನ ಹಾಗೂ ಪಾಲಿ ಅಧ್ಯಯನ ಕೇಂದ್ರಕ್ಕೆ ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ, ವಿಶ್ರಾಂತ ಕುಲಪತಿಗಳು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಇವರನ್ನು ನಿರ್ದೇಶಕರನ್ನಾಗಿ ನೇಮಿಸಿ ಮಾಹೆಯಾನ 30,000/-ಗಳ ಗೌರವ ಧನ ನೀಡಲು ಪ್ರಶಾಸನ ಸಮಿತಿಯು ಅನುಮೋದನೆ ನೀಡಿತು. |

ವಿಶ್ವವಿದ್ಯಾಲಯದಿಂದ ಹಮ್ಮಿಕೊಳ್ಳಲಾದ ಈ ಯೋಜನೆಗೆ ಪ್ರಶಾಸನ ಸಮಿತಿಯ ಎಲ್ಲಾ ಸದಸ್ಯರು ಪ್ರಶಂಸೆ ವ್ಯಕ್ತಪಡಿಸಿದರು.

ವಂದನಾರ್ಪಣೆಯೊಂದಿಗೆ ಸಭೆಯು ಮುಕ್ತಾಯವಾಯಿತು.

ಶ್ರೀ ವಿಶ್ವನಾಥ ಪಿ. ಹಿರೇಮಠ, ಕ.ಆ.ಸೇ.
ಕುಲಸಚಿವರು
ಸದಸ್ಯ ಕಾರ್ಯದರ್ಶಿಗಳು

ಡಾ. ಅಹಲ್ಯಾ ಎಸ್.
ಕುಲಪತಿಗಳು
ಅಧ್ಯಕ್ಷರು